# <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ :** 2015–16ನೇ ಸಾಲಿಗೆ ತಾಂತ್ರಿಕ ಮತ್ತು ವೈದ್ಯಕೀಯ ಶಿಕ್ಷಣ ಪಡೆಯುತ್ತಿರುವ **"ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ಪುಸ್ತಕ ಮತ್ತು ಕಲಿಕಾ ಸಾಮಾಗ್ರಿ"** ಪಡೆದುಕೊಳ್ಳಲು ಸಹಾಯಧನ ಮಂಜೂರು ಮಾಡುವ ಕುರಿತು.

**ಓದಲಾಗಿದೆ:**
1. 2015–16ನೇ ಸಾಲಿನ ಆಯವ್ಯಯ ಭಾಷಣ.
2. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರ ಏಕಕಡತ ಸಂಖ್ಯೆ: ಅಸಂನಿ/ತಾ&ವೈ/ಕ.ಸಾ./ಸಿಆರ್–09/2015–16 ದಿನಾಂಕ: 08–05–2015.

<><><>

**<u>ಪ್ರಸ್ತಾವನೆ</u>:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ 2015–16ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ–238 ರಲ್ಲಿ ಮಾನ್ಯ ಮುಖ್ಯಮಂತ್ರಿಗಳು ತಾಂತ್ರಿಕ ಮತ್ತು ವೈದ್ಯಕೀಯ ಶಿಕ್ಷಣ ಪಡೆಯುತ್ತಿರುವ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ಪುಸ್ತಕ ಮತ್ತು ಕಲಿಕಾ ಸಾಮಗ್ರಿ ಪಡೆದುಕೊಳ್ಳಲು ಸಹಾಯಧನ (ಪ್ರತಿ ವಿದ್ಯಾರ್ಥಿಗೆ ರೂ. 10,000/– ಗಳು ಡಿ.ಬಿ.ಟಿ ಮೂಲಕ) ನೀಡಲಾಗುವುದು ಎಂದು ಘೋಷಿಸಿರುತ್ತಾರೆ.

ಕೇಂದ್ರ ಸರ್ಕಾರದ ಯೋಜನೆಯಡಿ ಮೆರಿಟ್–ಕಮ್–ಮೀನ್ಸ್ ಆಧಾರಿತ ವಿದ್ಯಾರ್ಥಿ ವೇತನಗಳನ್ನು ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಕ್ಕರು, ಬೌದ್ಧರು ಮತ್ತು ಪಾರ್ಸಿ ಜನಾಂಗದವರಿಗೆ ನೀಡಲಾಗುತ್ತಿದೆ. ಈ ಯೋಜನೆಯಡಿಯಲ್ಲಿ ತಾಂತ್ರಿಕ ಹಾಗೂ ವೃತ್ತಿಪರ ವಿವಿಧ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ನೀಡಲಾಗುತ್ತಿದೆ. 2014–15ನೇ ಸಾಲಿನಲ್ಲಿ ಮೆರಿಟ್–ಕಮ್–ಮೀನ್ಸ್ ಆಧಾರಿತ ವಿದ್ಯಾರ್ಥಿ ವೇತನದಲ್ಲಿ ತಾಂತ್ರಿಕ ಮತ್ತು ವೈದ್ಯಕೀಯ ಶಿಕ್ಷಣ ಪಡೆದಿರುವ ಹಾಗೂ 2015–16ನೇ ಸಾಲಿನಲ್ಲಿ ಪಡೆಯುವ ಸಂಭಾವನೀಯ ಸುಮಾರು 20000 ವಿದ್ಯಾರ್ಥಿಗಳಿಗೆ (ರೂ. 10000x20000 ವಿದ್ಯಾರ್ಥಿಗಳು) 20.00 ಕೋಟಿ ಅನುದಾನವನ್ನು ಈ ಯೋಜನೆಗೆ ಒದಗಿಸಲಾಗಿದೆ. ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಉತ್ತೇಜನ ಯೋಜನೆಯ ಲೆಕ್ಕಶೀರ್ಷಿಕೆ:2225–03–277–2–61 ರಡಿ **"ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ಪುಸ್ತಕ ಮತ್ತು ಕಲಿಕಾ ಸಾಮಾಗ್ರಿ"** ಯೋಜನೆಗೆ ಹೆಚ್ಚುವರಿಯಾಗಿ ರೂ.20.00 ಕೋಟಿ ಅನುದಾನವನ್ನು ಮಂಜೂರು ಮಾಡಿ ಮೇಲ್ಕಂಡ ಮಾರ್ಗಸೂಚಿಯೊಂದಿಗೆ 2015–16ನೇ ಸಾಲಿನಿಂದ ಜಾರಿಗೆ ಬರುವಂತೆ ಸರ್ಕಾರಿ ಆದೇಶ ಹೊರಡಿಸಲು ಕೋರಿ ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

## <u>ಸರ್ಕಾರದ ಆದೇಶ ಸಂಖ್ಯೆ: MWD 161 MDS 2015 ದಿನಾಂಕ:22–09–2015.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ತಾಂತ್ರಿಕ ಮತ್ತು ವೈದ್ಯಕೀಯ ಶಿಕ್ಷಣ ಪಡೆಯುತ್ತಿರುವ **"ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ಪುಸ್ತಕ ಮತ್ತು ಕಲಿಕಾ ಸಾಮಾಗ್ರಿ"** ಪಡೆದುಕೊಳ್ಳಲು ಪ್ರತಿ ಅರ್ಹ ವಿದ್ಯಾರ್ಥಿಗೆ ರೂ.10,000/–ಗಳಂತೆ 2015–16ನೇ ಸಾಲಿಗೆ 2,500 ವಿದ್ಯಾರ್ಥಿಗಳಿಗೆ ಸೀಮಿತಗೊಳಿಸಿ ಮತ್ತು ವಿದ್ಯಾರ್ಥಿಯ ಶೈಕ್ಷಣಿಕ ಅವಧಿಯಲ್ಲಿ ಒಮ್ಮೆ ಮಾತ್ರ ನೀಡಲು ಈ ಕೆಳಕಂಡ ಷರತ್ತುಗೊಳಪಟ್ಟು ಸಹಾಯಧನ (ಪ್ರತಿ ವಿದ್ಯಾರ್ಥಿಗೆ ರೂ. 10,000/–ಗಳು ಡಿ.ಬಿ.ಟಿ ಮೂಲಕ) ಮಂಜೂರು ಮಾಡಲು ಆದೇಶಿಸಿದೆ.

**<u>ಷರತ್ತುಗಳು:–</u>**

1. **ಭಾರತ ಸರ್ಕಾರದ ಮೆರಿಟ್–ಕಮ್–ಮೀನ್ಸ್ ಆಧಾರಿತ ವಿದ್ಯಾರ್ಥಿ ವೇತನದ ಮಾರ್ಗಸೂಚಿಯನ್ನು ಅನುಸರಿಸಲಾಗುವುದು.**
2. **ಭಾರತ ಸರ್ಕಾರದ ಮೆರಿಟ್–ಕಮ್–ಮೀನ್ಸ್ ಆಧಾರಿತ ವಿದ್ಯಾರ್ಥಿ ವೇತನ ಯೋಜನೆಯಲ್ಲಿ ಅರ್ಹರಾದ ವಿದ್ಯಾರ್ಥಿಗಳು ಮಾತ್ರ ಈ ಯೋಜನೆಗೂ ಅರ್ಹರಾಗಿರುತ್ತಾರೆ.**

.......2